ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಪೌರಾಡಳಿತ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ(ಪದವೀಧರರ ಕ್ಷೇತ್ರ) –

684 (774) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪೌರಾಡಳಿತ ಇಲಾಖೆಯ ಪಟ್ಟಣ ಪಂಚಾಯತಿ, ಪುರಸಭೆ ಮತ್ತು ನಗರಸಭೆಗಳಲ್ಲಿ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಖಾಯಂ, ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಕ್ರಮಕೈಗೊಂಡಿದೆಯೇ;

(ಉ) ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ; ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು;

(ಊ) ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು?